ದಿ:-15/2/22 146ನೇ ಅಧಿವೇಶನ
ನಿ - 330
ಕ್ರ - 85

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ.ಶ್ರೀಕಂಠೇಗೌಡ., ಇವರು ನಿಯಮ-330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

## ವಿಷಯ

ವೃತ್ತಿ ಶಿಕ್ಷಣ (ಜೆ.ಓ.ಸಿ) ಇಲಾಖೆಯಲ್ಲಿ ಕಳೆದ 20-25 ವರ್ಷಗಳಿಂದ ಸೇವೆ ಸಲ್ಲಿಸಿದ ಶಿಕ್ಷಕರನ್ನು ದಿನಾಂಕ:06.04.2011ರ ವಿಶೇಷ ವಿಧೇಯಕದ ಅನ್ವಯ ವಿವಿಧ ಇಲಾಖೆಗಳಲ್ಲಿ ವಿಲೀನಗೊಳಿಸಿದ್ದು, ಆದರೆ ಇವರ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಿರುವುದಿಲ್ಲ. ಇದರಿಂದ ಸದರಿ ಶಿಕ್ಷಕರಿಗೆ ನಿವೃತ್ತಿ ನಂತರ ಪಿಂಚಣಿ ದೊರೆಯುವುದಿಲ್ಲ ಅಲ್ಲದೆ ಪದವಿ ಪೂರ್ವ ಕಾಲೇಜು ಉಪನ್ಯಾಸಕರುಗಳಿಗೆ ಬಿ.ಇಡಿ ಪದವಿ ಕಡ್ಡಾಯಗೊಳಿಸಿದೆ.

ಆದ್ದರಿಂದ, ಈ ವಿಧೇಯಕಕ್ಕೆ ತಿದ್ದುಪಡಿ ಮಾಡಿ ಇವರ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಿ, ನಿಶ್ಚಿತ ಪಿಂಚಣಿ ನೀಡುವುದು ಮತ್ತು ಉಪನ್ಯಾಸಕರ ಹಿಂದಿನ ಅರ್ಹತೆಯನ್ನು ಪರಿಗಣಿಸುವಂತೆ ಕೋರಿರುತ್ತಾರೆ.

## ಉತ್ತರ

ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಶಿಕ್ಷಣದಲ್ಲಿರುವ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ ಸಂಖ್ಯೆ:ಸಂವ್ಯಶಾಇ 22 ಶಾಸನ 2011, ದಿನಾಂಕ:06.04.2011 ರಂದು ಜಾರಿಗೆ ಬಂದಿದ್ದು, ಈ ವಿಧೇಯಕದಲ್ಲಿ ವಿಧಿಸಿರುವ ಷರತ್ತುಗಳ ಆಧಾರದ ಮೇಲೆ ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಉಪನ್ಯಾಸಕರನ್ನು ವಿಲೀನ ವಿಧೇಯಕದನ್ವಯ ದಿನಾಂಕ:06.04.2011ಕ್ಕೆ ನಿರಂತರವಾಗಿ 05 ವರ್ಷಗಳ ಸೇವೆ ಸಲ್ಲಿಸಿರುವ ನೌಕರರುಗಳನ್ನು ವಿವಿಧ ಇಲಾಖೆಗಳಲ್ಲಿ ವಿಲೀನಗೊಳಿಸಲಾಗಿದೆ. ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನು ಕರ್ತವ್ಯಕ್ಕೆ ಹಾಜರಾದ ನಂತರ, ಈ ಅಧಿನಿಯಮದ ಅಡಿಯಲ್ಲಿ ಆತನ ಪ್ರಾರಂಭಿಕ ಮೂಲ ವೇತನವನ್ನು, ಆತನು ವಿಲೀನಗೊಂಡ ಹುದ್ದೆಯ ಪ್ರವರ್ಗದ ಕಾಲಿಕ ವೇತನ ಶ್ರೇಣಿಯ ಕನಿಷ್ಠಕ್ಕೆ ನಿಗಧಿಗೊಳಿಸತಕ್ಕದ್ದು ಹಾಗೂ ತನ್ನ ವಿಲೀನಕ್ಕೆ ಮೊದಲು ಸಲ್ಲಿಸಿದ ಸೇವೆಯನ್ನು ವೇತನ, ಜೇಷ್ಠತೆ ಹಾಗೂ ರಜೆ ಅಥವಾ ಪಿಂಚಣಿಗೆ ಸಂಬಂಧಿಸಿದಂತೆ ಲೆಕ್ಕಕ್ಕೆ ತೆಗದುಕೊಳ್ಳತಕ್ಕದಲ್ಲ ಎಂಬ ಷರತ್ತು ವಿಧಿಸಲಾಗಿದೆ. ಅಲ್ಲದೆ, ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ 2011ರ ನಿಯಮ-3ರಲ್ಲಿ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ಒಂದು ಸಲದ ಕ್ರಮವಾಗಿ ವಿಲೀನಗೊಳಿಸಲು ಪರಿಗಣಿಸಲಾಗಿದೆ.

ಮಾನ್ಯ ಸುಪ್ರೀಂಕೋರ್ಟ್ ನ್ಯಾಯಾಲಯದ ಅಪೀಲು (ಸಿವಿಲ್) 3595-3612/1999 ದಿನಾಂಕ:10.04.2006ರ ರಾಜ್ಯ ಸರ್ಕಾರ ಮತ್ತು ಇತರರು ವಿರುದ್ಧ ಉಮಾದೇವಿ ಮತ್ತು ಇತರರು ಪ್ರಕರಣದಲ್ಲಿ ಒಂದು ಬಾರಿ ಕ್ರಮವಾಗಿ ಕ್ರಮಬದ್ಧಗೊಳಿಸಲು ಅವಕಾಶ ನೀಡಿ ಆದೇಶಿಸಿದ್ದು, ಅಂತಹ ವಿಲೀನ/ಕ್ರಮಬದ್ಧಗೊಳಿಸುವಿಕೆಯ ನಿಯಮಗಳನ್ನು ಮತ್ತೊಮ್ಮೆ ಯಾವುದೇ ತಿದ್ದುಪಡಿ ಮಾಡಬಾರದೆಂದು ಸ್ಪಷ್ಟ ನಿರ್ದೇಶನ ನೀಡಿರುವುದರಿಂದ, ಸದರಿ ಅಧಿನಿಯಮಕ್ಕೆ ತಿದ್ದುಪಡಿ ತರುವುದು ಘನ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನಗಳಿಗೆ ವ್ಯತಿರಿಕ್ತವಾಗುತ್ತದೆ. ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕ-2011ನ್ನು ಪುನಃ ತೆರೆಯಲು ಮತ್ತು ತಿದ್ದುಪಡಿ ಮಾಡಿ ಅವರ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಿ, ನಿಶ್ಚಿತ ಪಿಂಚಣಿ ನೀಡಲು ಹಾಗೂ ಅವರ ಹಿಂದಿನ ಅರ್ಹತೆಯನ್ನು ಪರಿಗಣಿಸಲು ಅವಕಾಶವಿರುವುದಿಲ್ಲ.

**ಸಂಖ್ಯೆ:ಇಪಿ 06 ಟಿವಿಇ 2022**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು